NOVEMBER 7, 2026
ALL INDIA RADIO- DHARWAD
PRADESH SAMACHARA (KANNADA) 7:05 AM

ಮುಖ್ಯಾಂಶಗಳು

- **ರಾಜ್ಯದಲ್ಲಿ ಬರಗಾಲದಿಂದ ಉಂಟಾಗಿರುವ** ಬೆಳೆ ನಷ್ಟ: ಪ್ರಧಾನಿ, ಕೃಷಿ ಸಚಿವರಿಗೆ ಖುದ್ದು ಮನವಿ ಸಲ್ಲಿಕೆಗೆ ಚಿಂತನೆ– ಉಪ ಮುಖ್ಯಮಂತ್ರಿ ಹೇಳಿಕೆ.

- **ತಿಂಗಳಿಗೆ ಕನಿಷ್ಠ ಮೂರು** ಬಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಕಡ್ಡಾಯ ಭೇಟಿ: ತಾಲ್ಲೂಕು ಆರೋಗ್ಯಾಧಿಕಾರಿಗಳಿಗೆ ಆರೋಗ್ಯ ಸಚಿವರ ಕಟ್ಟುನಿಟ್ಟಿನ ಸೂಚನೆ.

- **ಮುಂಬರುವ ದಿನಗಳಲ್ಲಿ** ದೊಡ್ಡ ಪ್ರಮಾಣದಲ್ಲಿ ನೀರಿನ ಸಮಸ್ಯೆ ಎದುರಾಗುವ ಸಾಧ್ಯತೆ: ಮಿತ ಬಳಕೆಗೆ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರ ಮನವಿ.

- **ದೀಪಾವಳಿ ಸಂದರ್ಭದಲ್ಲಿ** ಪಟಾಕಿ ಸಿಡಿಸದೇ ದೀಪ ಹಚ್ಚಿ, ಹಬ್ಬ ಆಚರಣೆ: ಚಾಮರಾಜನಗರ ಜಿಲ್ಲೆ, ಕುಂದಕೆರೆ ಗ್ರಾಮದ ವಿದ್ಯಾರ್ಥಿಗಳ ಮಾದರಿ ನಡೆ.

ಈಗ ವಾರ್ತೆಗಳ ವಿವರ

****

ರಾಜ್ಯದಲ್ಲಿ ಬರಗಾಲದಿಂದ ಉಂಟಾಗಿರುವ ಬೆಳೆ ನ ಷ್ಟಕ್ಕೆ ಸಂಬಂಧಿಸಿದಂತೆ ಪ್ರಧಾನಿ, ಗೃಹ ಸಚಿವರು ಮತ್ತು ಕೃಷಿ ಸಚಿವರನ್ನು ಖುದ್ದಾಗಿ ಭೇಟಿ ಮಾಡಿ, ಮನವಿ ಸಲ್ಲಿಸುವ ಉದ್ದೇಶವಿದೆ ಎಂದು ಕಂದಾಯ ಸಚಿವರೂ ಆಗಿರುವ ಉಪಮುಖ್ಯಮಂತ್ರಿ ಡಾ. ಜಿ.ಪರಮೇಶ್ವರ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಬರಗಾಲದಿಂದ ಉಂಟಾಗಿರುವ ಒಟ್ಟು ನ ಷ್ಟವನ್ನು 62 ಸಾವಿರ ಕೋಟಿ ರೂಪಾಯಿ ಎಂದು ಅಂದಾಜಿಸಲಾಗಿದೆ. ಈ ಕುರಿತು ಕೇಂದ್ರ ಸರ್ಕಾರಕ್ಕೆ ಈಗಾಗಲೇ ಮೂರು ಜ್ಞಾಪಕ ಪತ್ರ ಸಲ್ಲಿಸಲಾಗಿದ್ದು, ಎನ್‌ಡಿಆರ್‌ಎಫ್ ಮಾರ್ಗಸೂಚಿಗಳ ಅನ್ವಯ 22 ಸಾವಿರ ಕೋಟಿ ರೂಪಾಯಿ ಪರಿಹಾರ ನೀಡುವಂತೆ ಮನವಿ ಮಾಡಲಾಗಿದೆ ಎಂದರು.

****

ತಾಲ್ಲೂಕು ಆರೋಗ್ಯಾಧಿಕಾರಿಗಳು ತಮ್ಮ ವ್ಯಾಪ್ತಿಯ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ತಿಂಗಳಿಗೆ ಕನಿ ಷ್ಠ ಮೂರು ಬಾರಿಯಾದರೂ ಕಡ್ಡಾಯವಾಗಿ ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಎಂದು ಆರೋಗ್ಯ ಸಚಿವ ಯು.ಟಿ.ಖಾದರ್ ಸೂಚನೆ

ನೀಡಿದ್ದಾರೆ. ಚಿತ್ರದುರ್ಗದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಡೆದ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಕಟ್ಟುನಿಟ್ಟಿನ ಸೂಚನೆ ನೀಡಿದ ಸಚಿವರು, ತಾಲ್ಲೂಕು ಆರೋಗ್ಯಾಧಿಕಾರಿಗಳು ಕೇವಲ ಭೇಟಿ ಪುಸ್ತಕಕ್ಕೆ ಸಹಿ ಹಾಕುವುದಕ್ಕೆ ಸೀಮಿತವಾಗದೆ, ಕೊರತೆಗಳು ಮತ್ತು ಕೈಗೊಳ್ಳಬೇಕಾದ ಸುಧಾರಣೆಗಳ ಬಗ್ಗೆ ಸುದೀರ್ಘ ಟಿಪ್ಪಣಿ ಬರೆಯಬೇಕು ಎಂದರು. ಶಾಸಕರು ಹಾಗೂ ಸ್ಥಳೀಯ ಸಂಸ್ಥೆಗಳ ನೆರವಿನೊಂದಿಗೆ ಆಸ್ಪತ್ರೆಗಳ ನವೀಕರಣ ಮತ್ತು ನೈರ್ಮಲ್ಯ ನಿರ್ವಹಣೆಗೆ ಕ್ರಮ ಕೈಗೊಳ್ಳಬೇಕು. ಆಸ್ಪತ್ರೆಗಳಲ್ಲಿ ರೇಬೀಸ್ ಹಾಗೂ ಹಾವಿನ ಕಡಿತಕ್ಕೆ ನೀಡುವ ಆಂಟಿ–ವೆನಮ್ ಸೇರಿದಂತೆ ತುರ್ತು ಜೀವ ರಕ್ಷಕ ಔ ‘ಧಿಗಳ ಅಭಾವ ಎದುರಾಗದಂತೆ ನೋಡಿಕೊಳ್ಳಬೇಕು ಎಂದು ನಿರ್ದೇಶನ ನೀಡಿದರು.

****

ಮುಂದಿನ ದಿನಗಳಲ್ಲಿ ನೀರಿನ ಸಮಸ್ಯೆ ದೊಡ್ಡ ಪ್ರಮಾಣದಲ್ಲಿ ಎದುರಾಗುವ ಸಾಧ್ಯತೆ ಇರುವುದರಿಂದ ಸಾರ್ವಜನಿಕರು ನೀರನ್ನು ಮಿತವಾಗಿ ಬಳಸಬೇಕು ಎಂದು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ ಮನವಿ ಮಾಡಿದ್ದಾರೆ. ಜಿಲ್ಲಾ ಪಂಚಾಯತ ಸಭಾಂಗಣದಲ್ಲಿ ನಡೆದ ತ್ರೈಮಾಸಿಕ ಕೆಡಿಪಿ ಪ್ರಗತಿ ಪರಿಶೀಲನಾ ಸಭೆಯಲ್ಲಿ ಮಾತನಾಡಿದ ಅವರು, ಅನಗತ್ಯವಾಗಿ ಹೆಚ್ಚು ನೀರು ವ್ಯರ್ಥ ಮಾಡಬಾರದು. ನೀರಿನ ಬಳಕೆಯಲ್ಲಿ ಎಚ್ಚರಿಕೆ ವಹಿಸಬೇಕು. ಈ ನಿಟ್ಟಿನಲ್ಲಿ ಸಾರ್ವಜನಿಕರ ಸಹಕಾರ, ಸಹನೆ, ಸಲಹೆ ಹಾಗೂ ಪಾಲ್ಗೊಳ್ಳುವಿಕೆ ಅತ್ಯಂತ ಮಹತ್ವದ್ದಾಗಿದೆ ಎಂದರು. ಸರ್ಕಾರದ ಮಟ್ಟದಲ್ಲಿ ಕೈಗೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳ ಕುರಿತು ಈಗಾಗಲೇ ಎಲ್ಲ ಇಲಾಖೆಗಳ ಅಧಿಕಾರಿಗಳೊಂದಿಗೆ ಚರ್ಚಿಸಿ, ಕಾರ್ಯಪ್ರವೃತ್ತರಾಗಿದ್ದೇವೆ. ನೀರಿನ ಸಮಸ್ಯೆ ನಿವಾರಣೆಗೆ ರೂಪಿಸಿರುವ ಯೋಜನೆಗಳನ್ನು ಅಧಿಕಾರಿಗಳು ಸಮರ್ಪಕವಾಗಿ ಅನು ್ಠಾನಗೊಳಿಸಬೇಕು. ಯೋಜನೆಗಳ ನಿರ್ವಹಣೆಯಲ್ಲಿ ನಿರ್ಲಕ್ಷ್ಯ ವಹಿಸಿದರೆ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಕ್ರಿಮಿನಲ್ ಪ್ರಕರಣ ದಾಖಲಿಸಲಾಗುವುದು ಎಂದು ಸಚಿವರು ಎಚ್ಚರಿಕೆ ನೀಡಿದರು.

****

ರಾಜ್ಯದ ಜವಳಿ ಕ್ಷೇತ್ರದಲ್ಲಿ ಹೂಡಿಕೆ, ಉದ್ಯೋಗ ಸೃಷ್ಟಿ ಮತ್ತು ಸಮತೋಲಿತ ಪ್ರಾದೇಶಿಕ ಅಭಿವೃದ್ಧಿಗೆ ಹೊಸ ದಿಕ್ಕು ನೀಡಲಿರುವ ಕರ್ನಾಟಕ ಜವಳಿ ಮತ್ತು ಉಡುಪು ನೀತಿ 4.0 ಸಿದ್ಧವಾಗಿದ್ದು, ಶೀಘ್ರದಲ್ಲೇ ಮುಖ್ಯಮಂತ್ರಿ ಅವರಿಂದ ಅಧಿಕೃತವಾಗಿ ಅನಾವರಣಗೊಳ್ಳಲಿದೆ ಎಂದು ಜವಳಿ ಖಾತೆ ಸಚಿವ ರುದ್ರಪ್ಪ ಲಮಾಣಿ ತಿಳಿಸಿದ್ದಾರೆ. ವಿಕಾಸಸೌಧದಲ್ಲಿ ನಡೆದ ಕೈಮಗ್ಗ ಮತ್ತು ಜವಳಿ ಇಲಾಖೆಯ ಯೋಜನೆಗಳು ಹಾಗೂ ವಿವಿಧ ನಿಗಮಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ನೂತನ ಜವಳಿ ನೀತಿಯಲ್ಲಿ ರಾಜ್ಯದ ವಿವಿಧ ಭಾಗಗಳಿಗೆ ಹೂಡಿಕೆ ಮತ್ತು ಉದ್ಯೋಗಾವಕಾಶಗಳನ್ನು ವಿಸ್ತರಿಸುವ ಹಲವು ಹೊಸ ಕ್ರಮಗಳನ್ನು ಅಳವಡಿಸಲಾಗಿದೆ ಎಂದರು. ರೇ ್ಮ ನೂಲು ಉತ್ಪಾದನೆಯಿಂದ ಹಿಡಿದು ಮೌಲ್ಯವರ್ಧಿತ ಉತ್ಪನ್ನಗಳವರೆಗೆ ಸಂಪೂರ್ಣ ಮೌಲ್ಯ ಸರಪಳಿಗೆ ಹೊಸ ಹೂಡಿಕೆ ಮತ್ತು ಉದ್ಯೋಗಾವಕಾಶಗಳನ್ನು ಸೃಷ್ಟಿಸುವುದು ಸರ್ಕಾರದ ಉದ್ದೇಶ ಎಂದು ಸಚಿವ ರುದ್ರಪ್ಪ ಲಮಾಣಿ ತಿಳಿಸಿದರು

****

ಚಿತ್ರದುರ್ಗ ಜಿಲ್ಲೆ ಚಳ್ಳಕೆರೆ ನಗರಸಭೆ ವ್ಯಾಪ್ತಿಯಲ್ಲಿ ಆಧುನಿಕ ಮೂಲಸೌಕರ್ಯ ಒಳಗೊಂಡ ನೂತನ ವಾಣಿಜ್ಯ ಸಂಕೀರ್ಣ ನಿರ್ಮಾಣಕ್ಕೆ ರಾಜ್ಯ ಸರ್ಕಾರ ಆಡಳಿತಾತ್ಮಕ ಅನುಮೋದನೆ ನೀಡಿದೆ. ಸಚಿವ ಸಂಪುಟ ಸಭೆಯಲ್ಲಿ ಈ ನಿರ್ಧಾರ ಕೈಗೊಳ್ಳಲಾಗಿದ್ದು,

ಒಟ್ಟು 35.04 ಕೋಟಿ ಅಂದಾಜು ವೆಚ್ಚದಲ್ಲಿ ಈ ಸಂಕೀರ್ಣ ನಿರ್ಮಾಣವಾಗಲಿದೆ. ಚಳ್ಳಕೆರೆಯ ಬೆಂಗಳೂರು, ಪಾವಗಡ ಹಾಗೂ ಮಹದೇವಿ ರಸ್ತೆಗಳ ವಾರ್ಡ್ ಸಂಖ್ಯೆ 24 ರಲ್ಲಿ ಯೋಜನೆ ಅನು ಾನಗೊಳ್ಳಲಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವ ಟಿ. ರಘುಮೂರ್ತಿ ತಿಳಿಸಿದ್ದಾರೆ. ಪ್ರಸ್ತಾವಿತ ಸಂಕೀರ್ಣದಲ್ಲಿ 192 ವಾಣಿಜ್ಯ ಮಳಿಗೆಗಳು, ಹೈಪರ್ ಮಾರ್ಕೆಟ್, ಕಚೇರಿಗಳು, ರೆಸ್ಟೋರೆಂಟ್ ಹಾಗೂ ಸುಸಜ್ಜಿತ ಪಾರ್ಕಿಂಗ್ ವ್ಯವಸ್ಥೆ ಇರಲಿದೆ. ಈ ಯೋಜನೆಯಿಂದ ಸ್ಥಳೀಯ ವ್ಯಾಪಾರಿಗಳಿಗೆ ಉತ್ತಮ ಮಾರುಕಟ್ಟೆ ಅವಕಾಶ, ಉದ್ಯೋಗ ಸೃಷ್ಟಿ ಹಾಗೂ ನಗರಸಭೆಗೆ ವಾರ್ಷಿಕ ಸುಮಾರು 7 ಕೋಟಿ ಆದಾಯ ಹರಿದುಬರುವ ನಿರೀಕ್ಷೆಯಿದೆ ಎಂದು ಸಚಿವರು ಮಾಹಿತಿ ನೀಡಿದರು

****

ಈಗ ಪ್ರಕಟಣೆ ನಂತರ ಪ್ರದೇಶ ಸಮಾಚಾರ ಮುಂದುವರಿಯುವುದು..

ಪ್ರಕಟಣೆ–32 ಸೆಕೆಂಡ್ಸ್

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

****

ದೀಪಾವಳಿ ಸಂದರ್ಭದಲ್ಲಿ ಪಟಾಕಿ ಸಿಡಿಸದೇ ದೀಪಗಳನ್ನು ಹಚ್ಚಿ, ಪರಿಸರ ಪ್ರೇಮಿ ಹಬ್ಬ ಆಚರಿಸುವುದಾಗಿ ಗುಂಡ್ಲುಪೇಟೆ ತಾಲೂಕಿನ ಕುಂದಕೆರೆ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳು ಪ್ರತಿಜ್ಞೆ ಮಾಡಿ ಮಾದರಿಯಾಗಿದ್ದಾರೆ. ದೀಪಾವಳಿ ಹಬ್ಬಕ್ಕೆ ಪಟಾಕಿ ಹಚ್ಚದೆ, ನೆಲ, ಜಲ, ಶಬ್ದ, ವಾಯುಮಾಲಿನ್ಯ ಮಾಡದೆ, ನಮ್ಮ–ನಮ್ಮ ಮನೆಗಳಲ್ಲಿ ಮಣ್ಣಿನ ಹಣತೆಗಳನ್ನು ಹಚ್ಚುವ ಮೂಲಕ ಪರಿಸರ ಸ್ನೇಹಿ ದೀಪಾವಳಿ ಆಚರಿಸುತ್ತೇವೆ ಎಂದು ನಿರ್ಧರಿಸಿ, ರಾಜ್ಯದ ಗಮನ ಸೆಳೆದಿದ್ದಾರೆ. ಈ ಕುರಿತು ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ ಶಾಲೆಯ ಮುಖ್ಯ ಶಿಕ್ಷಕ ಮಹದೇಶ್ವರಸ್ವಾಮಿ ಅವರು..

ಧ್ವನಿ–ಮಹದೇಶ್ವರಸ್ವಾಮಿ–31 ಸೆಕೆಂಡ್ಸ್

****

ಶಿಕ್ಷಣ ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಕೇಂದ್ರ ಸರ್ಕಾರ ವಿಶೇ ' ಒತ್ತು ನೀಡುತ್ತಿದ್ದು, ಗ್ರಾಮೀಣ ಭಾಗದ ಶೈಕ್ಷಣಿಕ ಮೂಲಸೌಕರ್ಯ ಬಲಪಡಿಸಲು ನಿರಂತರವಾಗಿ ಶ್ರಮಿಸುತ್ತಿದೆ ಎಂದು ಕೇಂದ್ರ ಶಿಕ್ಷಣ ಸಚಿವ ಪ್ರಲ್ಹಾದ ಜೋಶಿ ಹೇಳಿದ್ದಾರೆ. ಧಾರವಾಡ ಜಿಲ್ಲೆಯ ನವಲಗುಂದ ತಾಲೂಕಿನ ಬಂಡಿವಾಡ ಗ್ರಾಮದ ಸರ್ಕಾರಿ ಶಾಲೆಯಲ್ಲಿ 75 ಲಕ್ಷ ವೆಚ್ಚದ ನೂತನ ಶಾಲಾ ಕೊಠಡಿಗಳ ನಿರ್ಮಾಣ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ಇತ್ತೀಚೆಗೆ ಸುರಿದ ಭಾರಿ ಮಳೆ ಮತ್ತು ಗಾಳಿಯಿಂದಾಗಿ ಶಾಲೆಯ ಮೇಲ್ಛಾವಣಿ ಹಾನಿಗೊಂಡಿದ್ದ ವಿ 'ಯ ತಿಳಿಯುತ್ತಿದ್ದಂತೆ, ಅಧಿಕಾರಿಗಳೊಂದಿಗೆ ಹಾಗೂ ಟಾಟಾ ಪಿಟಾಚಿ ಕಂಪನಿಯ ಆಡಳಿತ ಮಂಡಳಿಯೊಂದಿಗೆ ಚರ್ಚಿಸಿ, ಈ ಅನುದಾನ ಒದಗಿಸಲಾಗಿದೆ. ವಿದ್ಯಾರ್ಥಿಗಳು ಮತ್ತು ಶಿಕ್ಷಕರ ಸುರಕ್ಷತೆಗೆ ಮೊದಲ ಆದ್ಯತೆ ನೀಡಲಾಗಿದ್ದು, ಈ ನೂತನ ಕೊಠಡಿಗಳು ಮಕ್ಕಳಿಗೆ ಸುರಕ್ಷಿತ ಹಾಗೂ ಗುಣಮಟ್ಟದ ಶೈಕ್ಷಣಿಕ ವಾತಾವರಣ ನಿರ್ಮಿಸಲಿವೆ ಎಂದು ಸಚಿವರು ತಿಳಿಸಿದರು.

****

ಕಾಮಗಾರಿಗಳಲ್ಲಿ ಗುಣಮಟ್ಟ ಕಾಯ್ದುಕೊಂಡು, ನಿಗದಿತ ಅವಧಿಯೊಳಗೆ ರೈಲ್ವೆ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು ಎಂದು ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ತುಮಕೂರಿನ ತಿಪಟೂರು ರೈಲ್ವೆ ನಿಲ್ದಾಣ ಕಾಮಗಾರಿ

ಸೇರಿದಂತೆ ನಗರದಲ್ಲಿ ನಡೆಯುತ್ತಿರುವ ರೈಲ್ವೆ ಕಾಮಗಾರಿಗಳ ಪ್ರಗತಿ ಪರಿಶೀಲನೆ ನಡೆಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ರೈಲ್ವೆ ಕಾಮಗಾರಿಗಳು ವೇಗವಾಗಿ ನಡೆಯುತ್ತಿದ್ದು, ಹಾಸನ–ಹಿರಿಯೂರು ಗ್ರೀನ್ ಬೆಲ್ಟ್ ಕಾರಿಡಾರ್ ಯೋಜನೆ ಟೆಂಡರ್ ಹಂತದಲ್ಲಿದೆ ಎಂದರು. ಡಿಸೆಂಬರ್ ಅಂತ್ಯದೊಳಗೆ ಎಲ್ಲಾ ರೈಲ್ವೆ ಕಾಮಗಾರಿಗಳನ್ನು ಪೂರ್ಣಗೊಳಿಸಿ, ಸಾರ್ವಜನಿಕರ ಮುಕ್ತ ಸಂಚಾರಕ್ಕೆ ಅವಕಾಶ ಕಲ್ಪಿಸಬೇಕು. ಮೇಲ್ಸೇತುವೆಗಳು ಮತ್ತು ಕೆಳಸೇತುವೆಗಳು ಪೂರ್ಣಗೊಂಡ ನಂತರ ರಸ್ತೆ ಸಂಚಾರಕ್ಕೆ ಯಾವುದೇ ಅಡಚಣೆಯಿಲ್ಲದೆ ಸುಗಮ ಸಂಚಾರಕ್ಕೆ ಅನುಕೂಲವಾಗುವುದರ ಜೊತೆಗೆ ರಸ್ತೆ ಬಳಕೆದಾರರು ಹಾಗೂ ರೈಲ್ವೆ ಕಾರ್ಯಾಚರಣೆಗಳ ಸುರಕ್ಷತೆಯೂ ಹೆಚ್ಚಲಿದೆ ಎಂದು ಸಚಿವರು ಹೇಳಿದರು.

****

ಮಾಜಿ ಮುಖ್ಯಮಂತ್ರಿ ರಾಮಕೃ ್ಣ ಹೆಗಡೆ ಅವರ ಜನ್ಮಶತಮಾನೋತ್ಸವದ ಅಂಗವಾಗಿ ಇದೇ 13 ರಂದು ಬೆಳಿಗ್ಗೆ 10.30 ಕ್ಕೆ ಬೆಂಗಳೂರಿನ ಗಾಂಧಿ ಭವನದ ಮಹದೇವ ದೇಸಾಯಿ ಸಭಾಂಗಣದಲ್ಲಿ, ಕರ್ನಾಟಕ ರಾಜ್ಯ ನೀತಿ ಮತ್ತು ಯೋಜನಾ ಆಯೋಗದ ವತಿಯಿಂದ 'ವಿಕೇಂದ್ರೀಕರಣ ಹಾಗೂ ಯೋಜನಾಬದ್ಧ ಅಭಿವೃದ್ಧಿ' ವಿ 'ಯದ ಕುರಿತು ವಿಶೇ ' ವಿಚಾರ ಸಂಕಿರಣ ಹಮ್ಮಿಕೊಳ್ಳಲಾಗಿದೆ.

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ರಾಜ್ಯದಲ್ಲಿ ಬರಗಾಲದಿಂದ ಉಂಟಾಗಿರುವ ಬೆಳೆ ನಷ್ಟ: ಪ್ರಧಾನಿ, ಕೃಷಿ ಸಚಿವರಿಗೆ ಖುದ್ದು ಮನವಿ ಸಲ್ಲಿಕೆಗೆ ಚಿಂತನೆ–ಉಪ ಮುಖ್ಯಮಂತ್ರಿ ಹೇಳಿಕೆ.

ತಿಂಗಳಿಗೆ ಕನಿಷ್ಠ ಮೂರು ಬಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಕಡ್ಡಾಯ ಭೇಟಿ: ತಾಲ್ಲೂಕು ಆರೋಗ್ಯಾಧಿಕಾರಿಗಳಿಗೆ ಆರೋಗ್ಯ ಸಚಿವರ ಕಟ್ಟುನಿಟ್ಟಿನ ಸೂಚನೆ.

ಮುಂಬರುವ ದಿನಗಳಲ್ಲಿ ದೊಡ್ಡ ಪ್ರಮಾಣದಲ್ಲಿ ನೀರಿನ ಸಮಸ್ಯೆ ಎದುರಾಗುವ ಸಾಧ್ಯತೆ: ಮಿತ ಬಳಕೆಗೆ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವರ ಮನವಿ.

ದೀಪಾವಳಿ ಸಂದರ್ಭದಲ್ಲಿ ಪಟಾಕಿ ಸಿಡಿಸದೇ ದೀಪ ಹಚ್ಚಿ, ಹಬ್ಬ ಆಚರಣೆ: ಚಾಮರಾಜನಗರ ಜಿಲ್ಲೆ, ಕುಂದಕೆರೆ ಗ್ರಾಮದ ವಿದ್ಯಾರ್ಥಿಗಳ ಮಾದರಿ ನಡೆ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು
ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ ಈ ಬೆಳಿಗ್ಗೆ 7 ಗಂಟೆ 35 ನಿಮಿಷಕ್ಕೆ

****